ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೬**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**(ಮುಂದುವರೆದ ಉಪವೇಶನ)**

**ಶುಕ್ರವಾರ, ದಿನಾಂಕ: ೧೭ನೇ ಮಾರ್ಚ್, ೨೦೧೭**

---

**ಸಮೂಹ – V**

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ಉನ್ನತ ಶಿಕ್ಷಣ ಸಚಿವರು

೪. ವಸತಿ ಸಚಿವರು

೫. ಸಣ್ಣ ಕೈಗಾರಿಕೆ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು

೭. ಸಾರಿಗೆ ಸಚಿವರು

೮. ಗಣಿ ಮತ್ತು ಭೂವಿಜ್ಞಾನ ಸಚಿವರು

---

## ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೭೬ (೬೭೩) ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಎಷ್ಟು ಶಾಲೆಗಳಲ್ಲಿ ದೈಹಿಕ ಶಿಕ್ಷಕರ ಕೊರತೆಯಿದೆ ; (ವಿವರ ನೀಡುವುದು)

(ಆ) ಪ್ರತಿ ಶಾಲೆಗೂ ಕನಿಷ್ಠ ಒಬ್ಬ ದೈಹಿಕ ಶಿಕ್ಷಕರಿರಬೇಕೆಂದು ನಿಯಮವಿರುವುದು ನಿಜವೇ ; ಇದ್ದಲ್ಲಿ, ವಿವರ ನೀಡುವುದು ;

(ಇ) ಸದರಿ ನಿಯಮದನ್ವಯ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಮುಂದಾಗುವುದೇ ;

(ಈ) ಇದಕ್ಕಾಗಿ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ೦೧–೦೬–೧೯೮೭ರ ನಂತರ ಪ್ರಾರಂಭವಾದ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ ) –**

೭೭ (೬೨) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ದಿನಾಂಕ: ೧.೬.೧೯೮೭ರ ನಂತರ ಎಷ್ಟು ಖಾಸಗಿ ಪ್ರಥಮ ದರ್ಜೆ ಕಾಲೇಜುಗಳು ಪ್ರಾರಂಭವಾಗಿರುವುವು ; (ವಿವರ ನೀಡುವುದು)

(ಆ) ಹೀಗೆ ಪ್ರಾರಂಭವಾದ ಒಟ್ಟು ಕಾಲೇಜುಗಳಲ್ಲಿ ಯು.ಜಿ.ಸಿ. ಮತ್ತು ವಿಶ್ವವಿದ್ಯಾಲಯಗಳ ನಿಯಮಾವಳಿಗಳ ಪ್ರಕಾರ ಎಷ್ಟು ಕಾಲೇಜುಗಳು ಮೂಲಭೂತ ಸೌಲಭ್ಯಗಳನ್ನು ಹೊಂದಿವೆ ; (ವಿವರವಾದ ಪಟ್ಟಿ ನೀಡುವುದು)

(ಇ) ದಿನಾಂಕ: ೧.೬.೧೯೮೭ರ ನಂತರ ಪ್ರಾರಂಭವಾದ ಪ್ರಥಮ ದರ್ಜೆ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಕ್ಕೆ ಸೇರಿದ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವ ದಿನಾಂಕದವರೆಗೆ ಅನುದಾನಕ್ಕೆ ಒಳಪಡಿಸಲಾಗಿದೆ ;

(ಈ) ೧.೬.೧೯೮೭ರ ನಂತರ ಪ್ರಾರಂಭವಾಗಿರುವ ಪ್ರಥಮ ದರ್ಜೆ ಕಾಲೇಜುಗಳ ಆಡಳಿತ ಮಂಡಳಿಯವರು ಅನುದಾನಕ್ಕೆ ಒಳಪಡಿಸಬೇಕೆಂದು ಸರ್ಕಾರಕ್ಕೆ ಮನವಿಯನ್ನು ಮತ್ತು ಪ್ರಸ್ತಾವನೆಗಳನ್ನು ಸಲ್ಲಿಸಿದ್ದಾರೆಯೇ ; (ವಿವರ ನೀಡುವುದು)

ಉ) ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮ–೯ರಡಿಯಲ್ಲಿ ಯು.ಜಿ.ಸಿ. ನ್ಯಾಕ್‌ನಿಂದ ಕನಿಷ್ಠ ಬಿ. ಗ್ರೇಡ್ ಮಾನ್ಯತೆ ಪಡೆದ ಸಾಮಾನ್ಯ ಆಡಳಿತ ಮಂಡಳಿಯವರು ನಡೆಸುತ್ತಿರುವ ಖಾಸಗಿ ಅನುದಾನ ರಹಿತ ಪದವಿ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಅವಕಾಶವಿದೆಯೇ ?

**ರಾಜಧನದ ಶೇ. ೩೫ರಷ್ಟು ಸ್ಥಳೀಯ ಸಂಸ್ಥೆಗಳಿಗೆ ನೀಡುವ ಕುರಿತು**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೭೮ (೬೩೬) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಮರಳು ಗಣಿಗಾರಿಕೆಯಿಂದ ವಸೂಲಿ ಮಾಡಿದ ರಾಜಧನದ ಮೊತ್ತವೆಷ್ಟು ; (ಜಿಲ್ಲಾವಾರು–ವರ್ಷಾವಾರು ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಕರಾವಳಿಯ ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಸಿಆರ್‌ಝಡ್ ವ್ಯಾಪ್ತಿಯ ಮರಳಿನ ದಿಬ್ಬ ತೆರವುಗೊಳಿಸುವ ಸಂದರ್ಭ, ಸಂಗ್ರಹವಾದ ರಾಜಧನದ ಮೊತ್ತವೆಷ್ಟು ; (ತಾಲ್ಲೂಕು ಮತ್ತು ಜಿಲ್ಲೆ–ವರ್ಷವಾರು ವಿವರ ನೀಡುವುದು)

(ಇ) ಹೀಗೆ ಸಂಗ್ರಹವಾದ ರಾಜಧನದಲ್ಲಿ ಶೇ.೩೫ರಷ್ಟು ಮೊತ್ತವನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳಿಗೆ ನೀಡುವ ಬಗ್ಗೆ ಆದೇಶ ಹೊರಡಿಸಲಾಗಿದೆಯೇ ; (ಆದೇಶ ಪ್ರತಿ ಒದಗಿಸುವುದು)

(ಈ) ಸ್ಥಳೀಯ ಸಂಸ್ಥೆಗಳಿಗೆ ರಾಜಧನ ಶೇ.೨೫ರಷ್ಟು ಮೊತ್ತವನ್ನು ವರ್ಗಾಯಿಸುವ ಬಗ್ಗೆ ಎಷ್ಟು ಜಿಲ್ಲೆಗಳಿಂದ ಪ್ರಸ್ತಾವನೆ ಸ್ವೀಕರಿಸಲಾಗಿದೆ ; ಜಿಲ್ಲಾ ಕಛೇರಿಗಳಿಂದ ಪ್ರಸ್ತಾವನೆ ಸ್ವೀಕೃತಗೊಂಡು ವರ್ಷ ಕಳೆದರೂ ಸರ್ಕಾರ ಅನುಮತಿ ನೀಡದಿರುವುದು ನಿಜವೇ ; ಇದಕ್ಕಿರುವ ತೊಡಕುಗಳೇನು ;

(ಉ) ಹೀಗೆ ಕಳೆದ ೫ ವರ್ಷಗಳಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಪಾವತಿಸಿರುವ ಹಾಗೂ ಪಾವತಿಗೆ ಬಾಕಿ ಇರುವ ಮೊತ್ತ ಎಷ್ಟು ; (ಜಿಲ್ಲೆ, ವರ್ಷಾವಾರು ವಿವರ ಒದಗಿಸುವುದು)

(ಊ) ಮರಳುಗಾರಿಕೆ, ಕೆಂಪು–ಕಪ್ಪು ಕಲ್ಲು ಗಣಿಗಾರಿಕೆ ಸೇರಿದಂತೆ ವಿವಿಧ ಗಣಿಗಾರಿಕೆಯಿಂದ ವಸೂಲಾಗುವ ರಾಜಧನದ ಶೇ.೨೫ರಷ್ಟು ಪಾಲನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳಲ್ಲಿನ ರಸ್ತೆ ಮತ್ತಿತರ ಮೂಲ ಸೌಕರ್ಯ ಅಭಿವೃದ್ಧಿಗೆ ನೀಡುವ ಬಗ್ಗೆ ಸರ್ಕಾರದ ನಿಲುವೇನು ; ಈ ಕುರಿತು ಯಾವ ಹಂತದಲ್ಲಿ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ಒದಗಿಸುವುದು)

## ಅತಿಥಿ ಉಪನ್ಯಾಸಕರಿಗೆ ಗೌರವಧನ ಹೆಚ್ಚಿಸುವ ಪ್ರಸ್ತಾವನೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೭೯ (೬೬೩) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ಗೌರವಧನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಪ್ರಸ್ತುತ ನೀಡುತ್ತಿರುವ ಗೌರವಧನವನ್ನು ಪ್ರತಿ ತಿಂಗಳು ಬಟವಾಡೆ ಮಾಡದೆ ಇರುವುದರಿಂದ ಅತಿಥಿ ಉಪನ್ಯಾಸಕರ ಜೀವನ ನಿರ್ವಹಣೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅತಿಥಿ ಉಪನ್ಯಾಸಕರ ಮಾಸಿಕ ಗೌರವಧನವನ್ನು ಪ್ರತಿ ತಿಂಗಳ ಮೊದಲನೆ ವಾರದಲ್ಲಿ ವಿತರಿಸಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಈ) ಪ್ರತಿ ತಿಂಗಳು ಕ್ಲಿಷ್ಟ ಸಮಯದಲ್ಲಿ ಅತಿಥಿ ಉಪನ್ಯಾಸಕರ ಗೌರವಧನ ಬಿಡುಗಡೆ ಮಾಡಲು ಸರ್ಕಾರವು ಏನು ಕ್ರಮ ಕೈಗೊಳ್ಳಲಾಗಿದೆ ?

## P.D.O. ಹುದ್ದೆಯನ್ನು ಗ್ರೂಪ್ 'ಬಿ' ಹುದ್ದೆಗೆ ಉನ್ನತೀಕರಿಸುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೮೦ (೭೦೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಓ) ಹುದ್ದೆಯನ್ನು "ಗ್ರೂಪ್ ಬಿ" ಗೆಜೆಟೆಡ್ ಹುದ್ದೆಗೆ ಉನ್ನತೀಕರಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಆ) ಹಾಗಿದ್ದಲ್ಲಿ, ಈ ಕುರಿತು ಘನ ಆಯೋಗಕ್ಕೆ ಶಿಫಾರಸ್ಸು ಮಾಡಲಾಗಿದೆಯೇ ; ಇಲ್ಲವಾದಲ್ಲಿ, ಯಾವಾಗ ಮಾಡಲಾಗುವುದು ;

(ಇ) ಪಿಡಿಓ ಹುದ್ದೆಯನ್ನು "ಗ್ರೂಪ್ ಬಿ" ಹುದ್ದೆಗೆ ಉನ್ನತೀಕರಿಸಲು ಸರ್ಕಾರ ತೀರ್ಮಾನ ಕೈಗೊಂಡಿದ್ದು, ಯಾವ ಕಾಲಮಿತಿಯಲ್ಲಿ ಅಧಿಕೃತ ಆದೇಶ ಹೊರಡಿಸಿ, ಪಿಡಿಓ ಹುದ್ದೆಯನ್ನು ಗ್ರೂಪ್ ಬಿ ಹುದ್ದೆಗೆ ಉನ್ನತೀಕರಿಸಲಾಗುವುದು ? (ಸ್ಪಷ್ಟನೆ ನೀಡುವುದು)

## ಬಿಸಿಯೂಟ ಯೋಜನೆಯ ಬೇಳೆಕಾಳು ಹಾಗೂ ಅಕ್ಕಿಯನ್ನು ಹಾಡು ಹಗಲೇ ದರೋಡೆ ಮಾಡುತ್ತಿರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೮೧ (೬೬೦) ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾರವಾರ ಜಿಲ್ಲೆಯಲ್ಲಿ ಕೆಲವೊಂದು ತಾಲ್ಲೂಕು ಕೇಂದ್ರದಲ್ಲಿ ಬಿಸಿಯೂಟದ ಬೇಳೆ ಕಾಳು ಹಾಗೂ ಅಕ್ಕಿ ಮುಂತಾದ ಪದಾರ್ಥಗಳು ಹಾಡು ಹಗಲೇ ದರೋಡೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ದಿನಾಂಕ: ೨೨.೦೨.೨೦೧೭ರಂದು ಹಳಿಯಾಳ–ದಾಂಡೇಲಿ ಮಧ್ಯ ಸರ್ಕಾರದ ಮಹಾತ್ವಕಾಂಕ್ಷಿ ಯೋಜನೆಯಾದ ಅಕ್ಷರ ದಾಸೋಹದ (ಬಿಸಿಯೂಟ) ಅಕ್ಕಿ ಹಾಗೂ ಬೇಳೆ ಕಾಳುಗಳು ಮಾರ್ಗ ಮಧ್ಯದಲ್ಲಿಯೇ ಇಳಿಸುವಾಗ ಅದನ್ನು ಸ್ಥಳೀಯ ಜನತೆ ಹಿಡಿದು ಸಂಬಂಧಿಸಿದ ತಹಶೀಲ್ದಾರರಿಗೆ ತಿಳಿಸಿ, ಅವರು ತನಿಖೆ ಮಾಡಿ ಪಂಚನಾಮೆ ಮಾಡಿರುವುದು ನಿಜವಲ್ಲವೇ ;

(ಇ) ಮೇಲ್ಕಂಡ ಕಾನೂನು ಬಾಹಿರ ಕೃತ್ಯದಲ್ಲಿ ಭಾಗಿಯಾಗಿರುವವರ ಮೇಲೆ ಕೈಗೊಳ್ಳುವ ಕ್ರಮವೇನು ?

## ಗ್ರಾಮ ಪಂಚಾಯತ್‌ಗಳಲ್ಲಿ ಹಳ್ಳಿ ಸಂತೆ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನ ಸಭೆಯಿಂದ ಚುನಾಯಿತರಾದವರು)–**

೮೨ (೭೧೮) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ದೊಡ್ಡ ಗ್ರಾಮ ಪಂಚಾಯತ್‌ಗಳಲ್ಲಿ ಹಳ್ಳಿ ಸಂತೆ ಏರ್ಪಡಿಸಲು ಮೂಲಭೂತ ಸೌಲಭ್ಯ ಕಲ್ಪಿಸಲು ಬಿಡುಗಡೆ ಮಾಡಿರುವ ಹಣ ಎಷ್ಟು; ಖರ್ಚಾಗಿರುವ ಹಣ ಎಷ್ಟು;

(ಆ) ಯಾವ ಯಾವ ಗ್ರಾಮ ಪಂಚಾಯತ್‌ಗಳಿಗೆ ಹಣ ಬಿಡುಗಡೆ ಮಾಡಿದೆ; (ವಿವರ ನೀಡುವುದು)

(ಇ) ಈ ಗ್ರಾಮ ಪಂಚಾಯತ್‌ಗಳು ತೆಗೆದುಕೊಂಡಿರುವ ಮೂಲಭೂತ ಸೌಕರ್ಯಗಳಾವುವು; (ವಿವರ ಒದಗಿಸುವುದು)

(ಈ) ಗ್ರಾಮ ಪಂಚಾಯತ್‌ಗಳನ್ನು ಆಯ್ಕೆ ಮಾಡಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳೇನು? (ವಿವರ ನೀಡುವುದು)

## ಖಾಸಗಿಯವರು ನಡೆಸುತ್ತಿರುವ ಪ್ಲೇ ಹೋಂಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)–**

೮೩(೬೮೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೆಂಗಳೂರು ಸೇರಿದಂತೆ ಪ್ರಮುಖ ನಗರಗಳಲ್ಲಿ ಖಾಸಗಿಯವರು ಪ್ಲೇ ಹೋಂಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಪ್ಲೇ ಹೋಂಗಳನ್ನು ನಡೆಸಲು ಸರ್ಕಾರದ ಶಿಕ್ಷಣ ಇಲಾಖೆಯ ಅನುಮತಿ ಪಡೆಯಬೇಕಾಗಿದೆಯೇ; ಪಡೆಯಬೇಕಾಗಿದ್ದಲ್ಲಿ ಅನುಸರಿಸಬೇಕಾದ ಮಾನದಂಡಗಳಾವುವು; ಹಾಗೂ ಶುಲ್ಕ ನಿಗದಿಪಡಿಸಲು ನಿಯಮ ರೂಪಿಸಲು ಸರ್ಕಾರ ಯೋಚಿಸಿದೆಯೇ;

(ಇ) ಖಾಸಗಿಯವರು ಪ್ಲೇ ಹೋಂಗಳನ್ನು ನಡೆಸಬೇಕಾದರೆ ಸರ್ಕಾರದಿಂದ ಯಾವ ರೀತಿಯ ಅನುಮತಿ ನೀಡಲಾಗುವುದು;

(ಈ) ಕಟ್ಟಡ, ಮೂಲಭೂತ ಸೌಕರ್ಯ ಎಲ್ಲವೂ ಸಮರ್ಪಕವಾಗಿದ್ದು ದುರುದ್ದೇಶ ಪೂರಕವಾಗಿ ಕೆಲವು ಪೋಷಕರು ದೂರಿದರೆ ಶಾಲೆಗೆ ನೀಡುವ ರಕ್ಷಣೆ ಏನು;

(ಉ) ಇಂತಹ ದುರುದ್ದೇಶ ಪೂರಿತ ದೂರುಗಳ ಮೇಲೆ ಶಾಲೆಯನ್ನು ಮುಚ್ಚಲು ಶಿಕ್ಷಣ ಇಲಾಖೆ ಆದೇಶ ನೀಡುವುದು ಸರಿಯೇ; ಇದರಿಂದ ಇತರೆ ಪೋಷಕರು ಹಾಗೂ ಮಕ್ಕಳಿಗೆ ತೊಂದರೆಯಾಗುವುದಿಲ್ಲವೆ;

(ಊ) ದುರುದ್ದೇಶ ಪೂರಿತವಾಗಿ ಸುಳ್ಳು ದೂರು ದಾಖಲಿಸಿ ಶಾಲೆಗಳಿಗೆ ಕೆಟ್ಟ ಹೆಸರು ತರುವ ಪಿಡುಗಿನ ನಿವಾರಣೆಗಾಗಿ ಶಿಕ್ಷಣ ಇಲಾಖೆ ಕೈಗೊಳ್ಳುವ ಕ್ರಮಗಳಾವುವು?

# ರಾಜ್ಯದಲ್ಲಿ ಬಹುಗ್ರಾಮ ಘನ ತ್ಯಾಜ್ಯ ವಿಲೇವಾರಿ ಘಟಕ ಪ್ರಾರಂಭಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೮೪ (೬೩೮) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳ ಘನ ತ್ಯಾಜ್ಯ ವಿಲೇವಾರಿಗೆ ಸರ್ಕಾರ ಹಾಕಿಕೊಂಡ ಕಾರ್ಯಕ್ರಮಗಳಾವುವು; ಮತ್ತು ರಾಜ್ಯದಲ್ಲಿ ಸರ್ಕಾರದ ಸಹಾಯಧನದೊಂದಿಗೆ ನಿರ್ಮಿಸಲಾದ ಘನ ತ್ಯಾಜ್ಯ ಘಟಕಗಳು ಎಷ್ಟು; ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಗ್ರಾಮ ಪಂಚಾಯತ್‌ಗಳಲ್ಲಿ ಅದೇ ಗ್ರಾಮ ಪಂಚಾಯತ್ ವ್ಯಾಪ್ತಿಯ ತ್ಯಾಜ್ಯಗಳನ್ನು ವಿಲೇ ಮಾಡಲು ಸದರಿ ಗ್ರಾಮ ಪಂಚಾಯತ್‌ಗಳಿಗೆ ಸಾರ್ವಜನಿಕರಿಂದ ವಿರೋಧ ಹಾಗೂ ಪ್ರತಿಭಟನೆಗಳು ನಡೆಯುತ್ತಿರುವುದು ಸರ್ಕಾರ ಗಮನಿಸಿದೆಯೇ; ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಹಾಗೂ ಘನ ತ್ಯಾಜ್ಯ ವಿಲೇವಾರಿ ಘಟಕಗಳ ಸ್ಥಾಪನೆಗೆ ಸರ್ಕಾರ ನೀತಿ ನಿಯಮ ಹಾಗೂ ಮಾನದಂಡಗಳನ್ನು ರೂಪಿಸುವುದೇ;

(ಇ) ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳಲ್ಲಿನ ಘನ ತ್ಯಾಜ್ಯ ವಿಲೇವಾರಿಗೆ ಇರುವ ಸಮಸ್ಯೆಗಳನ್ನು ಪರಿಹರಿಸಲು ಬಹುಗ್ರಾಮ ಘನ ತ್ಯಾಜ್ಯ ವಿಲೇವಾರಿ ಘಟಕಗಳನ್ನು ಸ್ಥಾಪಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ, ಕಾರಣವೇನು?

## ಹೈದ್ರಾಬಾದ್–ಕರ್ನಾಟಕದ ಭಾಗದಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಮೂಲಭೂತ ಸೌಕರ್ಯ ಕೊರತೆ ಹಾಗೂ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೮೫ (೨೦೯) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್–ಕರ್ನಾಟಕದ ಆರು ಜಿಲ್ಲೆಗಳು ಹಾಗೂ ಹರಪನಹಳ್ಳಿಯಲ್ಲಿ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಿನ್ಸಿಪಾಲ್ ಹುದ್ದೆ ಖಾಯಂ ಹುದ್ದೆಯಾಗಿರುತ್ತದೆಯೇ ಅಥವಾ ಪ್ರಭಾರ ಹುದ್ದೆಯಾಗಿರುತ್ತದೆಯೇ; (ಕಾಲೇಜುವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕದ ಆರು ಜಿಲ್ಲೆಗಳು ಹಾಗೂ ಹರಪನಹಳ್ಳಿಯಲ್ಲಿ ಮಂಜೂರಾಗಿ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳು; (ಬೋಧಕ ಹಾಗೂ ಬೋಧಕೇತರ ಅತಿಥಿ ಉಪನ್ಯಾಸಕರುಗಳ ಸಂಖ್ಯೆ ಎಷ್ಟು)

(ಇ) ಹೈದ್ರಾಬಾದ್–ಕರ್ನಾಟಕದ ಆರು ಜಿಲ್ಲೆಗಳು ಹಾಗೂ ಹರಪನಹಳ್ಳಿಯಲ್ಲಿ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; (ಕಾಲೇಜುವಾರು ಕೊರತೆಗಳ ಮಾಹಿತಿ ನೀಡುವುದು)

ಈ) ಮೇಲ್ಕಂಡ ನ್ಯೂನ್ಯತೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಬೇಕಾಗುವ ಹಣಕಾಸಿನ ಅವಶ್ಯಕತೆ ಅಂದಾಜು ಪಟ್ಟಿ ಮಾಡಲಾಗಿದೆಯೇ; ಇದ್ದರೆ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಕಳೆದ ೦೩ ವರ್ಷದಲ್ಲಿ ಸರ್ಕಾರ ಬಿಡುಗಡೆ ಮಾಡಿದ ಮೊತ್ತ ಎಷ್ಟು? (ಕಾಲೇಜುವಾರು ಸಂಪೂರ್ಣ ವಿವರ ನೀಡುವುದು)

## ಪಠ್ಯಪುಸ್ತಕ ಪರಿಷ್ಕರಣೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) –**

೮೬ (೬೯೭+೬೨೩+೬೯೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಪದವಿ ಪೂರ್ವ ತರಗತಿಗಳ ಪಠ್ಯ ಪುಸ್ತಕ ಪರಿಷ್ಕರಣೆ ಕಾರ್ಯ ಪೂರ್ಣಗೊಂಡಿದೆಯೇ; ಇಲ್ಲದಿದ್ದಲ್ಲಿ, ಯಾವ ಸಾಲಿನಿಂದ ಮಾಡಲಾಗುವುದು;

(ಆ) ಪಠ್ಯ ಪುಸ್ತಕ ಪರಿಷ್ಕರಣಾ ಸಮಿತಿಯನ್ನು ರಚಿಸಲಾಗಿದೆಯೇ; ರಚಿಸಿದ್ದಲ್ಲಿ, ಯಾವಾಗ ರಚಿಸಲಾಯಿತು; ಅವರುಗಳನ್ನು ಯಾವ ಯಾವ ಮಾನದಂಡದ ಮೇಲೆ ಆಯ್ಕೆ ಮಾಡಲಾಗಿದೆ; (ಸಮಿತಿಯಲ್ಲಿರುವವರ ವಿವರ ನೀಡುವುದು)

(ಇ) ಪರಿಷ್ಕೃತ ಪಠ್ಯ ಪುಸ್ತಕಗಳ ಮುದ್ರಣಕ್ಕೆ ಕ್ರಮ ಕೈಗೊಳ್ಳಲಾಗಿದೆಯೇ; ಯಾವ ಯಾವ ತರಗತಿಯ ಯಾವ ಯಾವ ಪಠ್ಯ ಪುಸ್ತಕಗಳ ಮುದ್ರಣಕ್ಕೆ ಆದೇಶವನ್ನು ಯಾವಾಗ ನೀಡಲಾಯಿತು; (ಪ್ರತಿಯೊಂದರ ದಿನಾಂಕ ಹಾಗೂ ವಿವರವನ್ನು ನೀಡುವುದು) ಪರಿಷ್ಕೃತ ಪಠ್ಯ ಪುಸ್ತಕಗಳ ಕರಡು ಸರ್ಕಾರಕ್ಕೆ ಸಲ್ಲಿಸಿದ್ದು ಯಾವಾಗ; (ಪ್ರತಿ ತರಗತಿ ಪಠ್ಯಪುಸ್ತಕವಾರು ವಿವರ ನೀಡುವುದು)

(ಈ) ಎನ್.ಸಿ.ಈ.ಆರ್.ಟಿ. ಪರಿಷ್ಕೃತ ಪಠ್ಯ ಪುಸ್ತಕಗಳ ಪರಿಶೀಲನೆಗಾಗಿ ಕರ್ನಾಟಕಕ್ಕೆ ಪತ್ರ ಬರೆದಿದೆಯೇ; ಯಾವಾಗ ಬರೆದಿದೆ; (ಪುಸ್ತಕ/ಪಠ್ಯ ಪುಸ್ತಕ ಪರಿಷ್ಕರಣೆಯ ಸಂಬಂಧಿಸಿದಂತೆ ಎನ್.ಸಿ.ಈ.ಆರ್.ಟಿ. ಯೊಂದಿಗೆ ನಡೆಸಿರುವ ಪತ್ರ ವ್ಯವಹಾರದ ಪ್ರತಿಗಳನ್ನು ಒದಗಿಸುವುದು)

(ಉ) ಪ್ರಸಕ್ತ ಎನ್.ಸಿ.ಈ.ಆರ್.ಟಿ. ಇಂದ ಪರಿಷ್ಕೃತ ಪಠ್ಯ ಪುಸ್ತಕಗಳ ಪರಿಶೀಲನೆ ನಡೆಯುತ್ತಿದೆಯೇ; ೨೦೧೭–೧೮ನೇ ಸಾಲಿನಲ್ಲಿ ೦೧ನೇ ತರಗತಿಯಿಂದ ೧೦ನೇ ತರಗತಿಯವರೆಗೆ ಅಳವಡಿಸಿಕೊಂಡಿರುವ ಅಥವಾ ಅಳವಡಿಸಿಕೊಳ್ಳಲಿರುವ ಪಠ್ಯ ಪುಸ್ತಕಗಳು ಯಾವುವು? (ವಿವರದೊಂದಿಗೆ ಅವುಗಳ ಪ್ರತಿ ನೀಡುವುದು)

## ಗ್ರಾಮೀಣ ವಸತಿ ಯೋಜನೆಯ ಅನುಷ್ಠಾನ ಮತ್ತು ಮೇಲ್ವಿಚಾರಣೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)–**

೮೭ (೭೨೧) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗ್ರಾಮೀಣ ವಸತಿ ಯೋಜನೆಗೆ ೨೦೧೨ರಿಂದ ಇಲ್ಲಿಯವರೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಈ ಯೋಜನೆಯ ಮೇಲ್ವಿಚಾರಣೆಯನ್ನು ಮಾಡುವವರು ಯಾರು;

(ಇ) ಈ ಯೋಜನೆಯ ಪರಿಣಾಮಕಾರಿ ಮೇಲ್ವಿಚಾರಣೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಕೆ.ಎಸ್.ಓ.ಯು. ಮೈಸೂರು ಇದರ ಮಾನ್ಯತೆ ಹಾಗೂ ಕಾರ್ಯವೈಖರಿ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು)–**

೮೮ (೭೨೪) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ಕೆ.ಎಸ್.ಓ.ಯು) ಕೋರ್ಸ್ ಮಾನ್ಯತೆಯ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

(ಆ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಯು.ಜಿ.ಸಿ.ಗೆ ಮಾನ್ಯತೆಯನ್ನು ಕೋರಿ ಸಲ್ಲಿಸಿರುವ ಮನವಿಯನ್ನು ಸರ್ಕಾರ ಯಾವ ರೀತಿ ಪರಿಗಣಿಸಿದೆ ;

(ಇ) ಸದರಿ ವಿಶ್ವವಿದ್ಯಾನಿಲಯದಲ್ಲಿ ಪ್ರವೇಶವನ್ನು ಪಡೆದುಕೊಂಡು ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಅಥವಾ ಅಭ್ಯರ್ಥಿಗಳಿಗೆ ಸರ್ಕಾರದ ಸಲಹೆ ಏನು ;

ಈ) ಸ್ಪಷ್ಟವಾಗಿ ಕೆ.ಎಸ್.ಓ.ಯು. ಯಾವ ಶೈಕ್ಷಣಿಕ ವರ್ಷದಿಂದ ಮಾನ್ಯತೆಯನ್ನು ಪಡೆದುಕೊಂಡಿಲ್ಲ; ಕೆ.ಎಸ್.ಓ.ಯು. ಹಿಂದೆ ನೀಡಿದ ಪ್ರವೇಶಕ್ಕೆ ಇಂದಿಗೂ ಕೂಡ ಪರೀಕ್ಷೆಗಳನ್ನು ಕೆ.ಎಸ್.ಓ.ಯು ನಡೆಸುತ್ತಿದ್ದು; ಇದರ ಬಗ್ಗೆ ಸರ್ಕಾರದ ನಿಲುವೇನು?

## ಕಾನೂನು ತೊಡಕುಗಳಿಂದಾಗಿ ವಸತಿ ಯೋಜನೆಗಳು ನೆನೆಗುದಿಗೆ ಬೀಳುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೮೯ (೬೮೬) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರದ ಅಸಂವಿಧಾನಿಕ ಸುತ್ತೋಲೆಗಳು ಮತ್ತು ಆದೇಶಗಳಿಂದ ಕಾನೂನು ತೊಡಕುಗಳುಂಟಾಗಿ ರಾಜೀವಗಾಂಧಿ ವಸತಿ ನಿಗಮದ ವಸತಿ ಯೋಜನೆಗಳು ನೆನೆಗುದಿಗೆ ಬೀಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಾನೂನು ತೊಡಕುಗಳನ್ನು ಬಗೆಹರಿಸಿ ವಸತಿ ಯೋಜನೆಗಳು ಸುಗಮವಾಗಿ ಜರುಗುವಂತೆ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳಾವುವು;

(ಇ) ಬೆಳಗಾವಿ ಜಿಲ್ಲೆಗೆ ೨೦೧೪ ರಿಂದ ೨೦೧೬ನೇ ಸಾಲಿಗೆ ವಿಶೇಷ ವರ್ಗದಡಿ (ಅಂಗವಿಕಲರು, ವಿದವೆಯರು) ಆಯ್ಕೆಯಾದ ಒಟ್ಟು ಫಲಾನುಭವಿಗಳೆಷ್ಟು;

(ತಾಲ್ಲೂಕುವಾರು ವಿವರ ನೀಡುವುದು) ಅವರುಗಳಿಗೆ ಈಗಾಗಲೇ ಬಿಡುಗಡೆಯಾದ ಅನುದಾನವೆಷ್ಟು; ಬಾಕಿ ಬಿಡುಗಡೆಯಾಗಬೇಕಾದ ಅನುದಾನವೆಷ್ಟು; ಯಾವ ಕಾಲಮಿತಿಯೊಳಗೆ ಪೂರ್ಣ ಪ್ರಮಾಣದ ಅನುದಾನ ಬಿಡುಗಡೆ ಮಾಡಲಾಗುವುದು;

(ಈ) ಸದರಿ ವಸತಿ ಯೋಜನೆಗಳು ಯಾವ ಹಂತದಲ್ಲಿವೆ; ಎಷ್ಟು ಮಂದಿಗೆ ವಸತಿ ಕಾಮಗಾರಿಗಳು ಪೂರ್ಣಗೊಂಡು ಅನುದಾನ ಬಿಡುಗಡೆ ಮಾಡಲಾಗಿದೆ;

(ಉ) ೨೦೧೭–೧೮ನೇ ಸಾಲಿಗೆ ವಿವಿಧ ವಸತಿ ಯೋಜನೆಗಳಡಿ ಎಷ್ಟು ವಸತಿ ರಹಿತ ಬಡವರಿಗೆ ಸೂರು ಕಲ್ಪಿಸಲು ಸರ್ಕಾರವು ಚಿಂತಿಸುತ್ತಿದೆ; ಎಷ್ಟು ಅನುದಾನವನ್ನು ಮೀಸಲಿರಿಸಲಿದೆ? (ವಸತಿ ಯೋಜನೆಗಳವಾರು ವಿವರ ನೀಡುವುದು)

## ಮಂಡ್ಯ ಜಿಲ್ಲೆಯಲ್ಲಿ ಗಣಿಗಾರಿಕೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೯೦ (೭೪೭) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ ಜಿಲ್ಲೆಗೆ ಒಳಪಡುವ ತಾಲ್ಲೂಕುಗಳಲ್ಲಿ ಎಷ್ಟು ವಿಧವಾದ ಗಣಿಗಾರಿಕೆಗಳಿವೆ;

(ಆ) ಸದರಿ ತಾಲ್ಲೂಕುಗಳಲ್ಲಿ ಚಾಲ್ತಿಯಲ್ಲಿರುವ ಗಣಿಗಾರಿಕೆಗಳ ಸಂಖ್ಯೆ ಎಷ್ಟು; (ಗಣಿಗಾರಿಕೆಗಳ ಕಂಪನಿಗಳ ಹೆಸರು, ಮಾಲೀಕರ ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

(ಇ) ಇಲ್ಲಿ ಅನಧಿಕೃತವಾಗಿ (ಅಕ್ರಮವಾಗಿ) ನಡೆಯುತ್ತಿರುವ ಗಣಿಗಾರಿಕೆಗಳು ಎಷ್ಟು; (ವಿವರ ಒದಗಿಸುವುದು)

(ಈ) ಅನಧಿಕೃತವಾಗಿ ನಡೆಯುತ್ತಿರುವ ಗಣಿಗಾರಿಕೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

**ಶ್ರೀನಿವಾಸ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 1107 ಪ್ರತಿಗಳು 1500 – ಪಿ2